# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಘವೇಂದ್ರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಮಲ್ಲಾಡಿಹಳ್ಳಿ, ಹೊಳಲ್ಕೆರೆ ತಾ, ಚಿತ್ರದುರ್ಗ ಸಂಸ್ಥೆಗೆ ಬಿ.ಎ.ಎಂ.ಎಸ್. ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು ಹೆಚ್ಚಿಸಲು ಅನುಮತಿ ನೀಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ನಿರಾಕ್ಷೇಪಣಾ ಪತ್ರ ಸಂಖ್ಯೆ:Ayush/84/M.E(2)2019-20, ದಿನಾಂಕ:22.09.2020.
2. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪ್ರಸ್ತಾವನೆ ಸಂಖ್ಯೆ:ACA/AFF/F/AY-48/2020-21, ದಿನಾಂಕ:21.09.2020.
3. NCISM ಇವರ ಅನುಮತಿ ಪತ್ರ ಸಂಖ್ಯೆ:4-93/2021-AY, ದಿನಾಂಕ:20.10.2021.
4. ಆಯುಕ್ತರು, ಆಯುಷ್ ಇಲಾಖೆ ಇವರ ಪತ್ರ ಸಂಖ್ಯೆ: ಆಯುಷ್/05/ಅ-(2)/ 2021-22.ದಿನಾಂಕ:16.02.2022.

* * * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ,(1)ರಲ್ಲಿ ರಾಘವೇಂದ್ರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಮಲ್ಲಾಡಿಹಳ್ಳಿ, ಹೊಳಲ್ಕೆರೆ ತಾ, ಚಿತ್ರದುರ್ಗ ಸಂಸ್ಥೆಗೆ 2020-21ನೇ ಶೈಕ್ಷಣಿಕ ಸಾಲಿನಿಂದ ಬಿ.ಎ.ಎಂ.ಎಸ್ ಪದವಿ ಕೋರ್ಸ್‌ನ ಪ್ರವೇಶ ಮಿತಿಯನ್ನು 50 ರಿಂದ 60ಕ್ಕೆ ಹೆಚ್ಚಿಸಲು ನಿರಾಕ್ಷೇಪಣಾ ಪತ್ರವನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(2)ರಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು 2021-22ನೇ ಶೈಕ್ಷಣಿಕ ಸಾಲಿನಿಂದ ಬಿ.ಎ.ಎಂ.ಎಸ್ ಕೋರ್ಸಿನ ಪ್ರವೇಶ ಮಿತಿಯನ್ನು 50 ರಿಂದ 60ಕ್ಕೆ ಹೆಚ್ಚಿಸಲು ನಮೂನೆ-5 ರಲ್ಲಿ Consent of Affiliation ಅನ್ನು ನೀಡಿರುತ್ತದೆ.

ಮೇಲೆ ಓದಲಾದ ಕ್ರ.ಸಂ,(3)ರಲ್ಲಿ ಸದರಿ ಸಂಸ್ಥೆಗೆ NCISM ಸಂಸ್ಥೆಯು ಬಿ.ಎ.ಎಂ.ಎಸ್ ಕೋರ್ಸಿನ ಪ್ರವೇಶ ಮಿತಿಯನ್ನು 2021-22ನೇ ಶೈಕ್ಷಣಿಕ ಸಾಲಿನಿಂದ 50 ರಿಂದ 60ಕ್ಕೆ ಹೆಚ್ಚಿಸಲು ಅನುಮತಿ ನೀಡಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(4)ರಲ್ಲಿ ಆಯುಕ್ತರು, ಆಯುಷ್ ಇಲಾಖೆ ಇವರು ರಾಘವೇಂದ್ರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಮಲ್ಲಾಡಿಹಳ್ಳಿ, ಹೊಳಲ್ಕೆರೆ ತಾ, ಚಿತ್ರದುರ್ಗ ಸಂಸ್ಥೆಗೆ 2021-22ನೇ ಶೈಕ್ಷಣಿಕ ಸಾಲಿನಿಂದ ಬಿ.ಎ.ಎಂ.ಎಸ್ ಪದವಿ ಕೋರ್ಸ್‌ನ ಪ್ರವೇಶಮಿತಿಯನ್ನು 50 ರಿಂದ 60ಕ್ಕೆ ಹೆಚ್ಚಿಸಲು ಅನುಮತಿ ನೀಡಿ ಆದೇಶ ಹೊರಡಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಆಯುಕ್ತರು, ಆಯುಷ್ ಇಲಾಖೆ ಇವರ ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ರಾಘವೇಂದ್ರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಮಲ್ಲಾಡಿಹಳ್ಳಿ, ಹೊಳಲ್ಕೆರೆ ತಾಲ್ಲೂಕು, ಚಿತ್ರದುರ್ಗ-577531 ಎಂಬ ಹೆಸರಿನಲ್ಲಿ 2021-22ನೇ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ

ಬಿ.ಎ.ಎಂ.ಎಸ್. ಕೋರ್ಸ್ ಪ್ರವೇಶ ಮಿತಿಯನ್ನು 50 ರಿಂದ 60ಕ್ಕೆ ಹೆಚ್ಚಿಸಲು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ:ಆಕುಕ 101 ಪಿಟಿಡಿ 2020,</u>**
**<u>ಬೆಂಗಳೂರು. ದಿನಾಂಕ:07.01.2023</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಘವೇಂದ್ರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಮಲ್ಲಾಡಿಹಳ್ಳಿ, ಹೊಳಲ್ಕೆರೆ ತಾ, ಚಿತ್ರದುರ್ಗ-577531 ಇವರಿಗೆ 2021-22ನೇ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ ಬಿ.ಎ.ಎಂ.ಎಸ್. ಕೋರ್ಸ್‌ನ ಪ್ರವೇಶ ಮಿತಿಯನ್ನು 50 ರಿಂದ 60ಕ್ಕೆ ಹೆಚ್ಚಿಸಲು **ಈ ಪ್ರಕರಣವನ್ನು ಪೂರ್ವನಿದರ್ಶನ ಪ್ರಕರಣವಾಗಿ ಪರಿಗಣಿಸದಿರುವ ಷರತ್ತಿನೊಂದಿಗೆ** ಸರ್ಕಾರದ ಅನುಮತಿ ನೀಡಲಾಗಿದೆ.

**<u>ಮುಂದುವರೆದಂತೆ, ಸದರಿ ಸಂಸ್ಥೆಯು ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು:-</u>**

1. ಬಿ.ಎ.ಎಂ.ಎಸ್. ಕೋರ್ಸ್‌ನ ಪ್ರವೇಶ ಮಿತಿಯನ್ನು ಹೆಚ್ಚಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
2. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮ/ಆದೇಶಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು ಮತ್ತು ಸರ್ಕಾರಿ ಕೋಟಾ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
3. NCISM ಸಂಸ್ಥೆಯು ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
4. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
5. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
6. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
7. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
8. ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಆಯುಕ್ತರು, ಆಯುಷ್ ಇಲಾಖೆ, ಇವರು, ಖಚಿತಪಡಿಸಿಕೊಳ್ಳುವುದು.
9. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

7/1/23

**(ಶೈಲಾ ಆರ್ ಗೊರವರ)**
ಸರ್ಕಾರದ ಅಧೀನ ಕಾರ್ಯದರ್ಶಿ-3,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಭಾವೈಪ ಮತ್ತು ಸಮನ್ವಯ)

**<u>ಇವರಿಗೆ:-</u>**

1. ಆಯುಕ್ತರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು 560009.

...3

2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಬ್ಲಾಕ್, ಜಯನಗರ, ಬೆಂಗಳೂರು-41.

3. ಪ್ರಾಂಶುಪಾಲರು, ರಾಘವೇಂದ್ರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಮಲ್ಲಾಡಿಹಳ್ಳಿ, ಹೊಳಲ್ಕೆರೆ ತಾ, ಚಿತ್ರದುರ್ಗ-577531.

4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ. ವಿಧಾನ ಸೌಧ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ. ವಿಕಾಸ ಸೌಧ, ಬೆಂಗಳೂರು.

3. ಸರ್ಕಾರದ ಜಂಟಿ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ. ವಿಕಾಸ ಸೌಧ, ಬೆಂಗಳೂರು.